**All India Radio: Bangalore**
**National Bulletin In Kannada**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**21.08.2025  7.35 am**

ಮುಖ್ಯಾಂಶಗಳು

೧.	ಮಾಸ್ಕೋದಲ್ಲಿ ಇಂದು ರಷ್ಯಾ ವಿದೇಶಾಂಗ ಸಚಿವರೊಂದಿಗೆ ಡಾ.ಎಸ್. ಜೈಶಂಕರ್ ಮಾತುಕತೆ

೨.	ದೀಪಾವಳಿ, ಛತ್ ಹಬ್ಬಗಳ ಸಂದರ್ಭದಲ್ಲಿ ೧೨ ಸಾವಿರ ವಿಶೇಷ ರೈಲುಗಳು ಸಂಚಾರ

೩.	ಮಧ್ಯಂತರ ಶ್ರೇಣಿಯ ಖಂಡಾಂತರ ಕ್ಷಿಪಣಿ 'ಅಗ್ನಿ ೫' ಪರೀಕ್ಷೆ ಯಶಸ್ವಿ

೪.	ವಿಶ್ವ ಕುಸ್ತಿ ಚಾಂಪಿಯನ್‌ಶಿಪ್: ಮಹಿಳೆಯರ ೫೭ ಕೆಜಿ ವಿಭಾಗದಲ್ಲಿ ಭಾರತದ ತಪಸ್ಯಾಗೆ ಚಿನ್ನ

><><><><><><><><

ಭಾರತ ಮತ್ತು ರಷ್ಯಾ ನಡುವಿನ ವಿಶೇಷ ಸವಲತ್ತು ಹೊಂದಿರುವ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಪ್ರಮುಖ ರಾಜತಾಂತ್ರಿಕ ಸಂವಾದದಲ್ಲಿ, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಇಂದು ಮಾಸ್ಕೋದಲ್ಲಿ ರಷ್ಯಾ ವಿದೇಶಾಂಗ ಸಚಿವ ಸೆರ್ಗೆಯ್ ಲಾವ್ರೊವ್ ಅವರನ್ನು ಭೇಟಿ ಮಾಡಿ, ಮಾತುಕತೆ ನಡೆಸಲಿದ್ದಾರೆ. ಈ ಮಾತುಕತೆಗಳು ಆರ್ಥಿಕ ಸ್ಥಿತಿಸ್ಥಾಪಕತ್ವ ಮತ್ತು ಬಹುಧ್ರುವೀಯ ಸಹಕಾರದ ಮೇಲೆ ಬಲವಾದ ಒತ್ತು ನೀಡುವ ಮೂಲಕ ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ವ್ಯಾಪಕ ಶ್ರೇಣಿಯನ್ನು ಒಳಗೊಳ್ಳುವ ನಿರೀಕ್ಷೆಯಿದೆ. ಆರ್ಥಿಕ ಸಾರ್ವಭೌಮತ್ವವನ್ನು ಕಾಪಾಡುವ ಮತ್ತು ದ್ವಿಪಕ್ಷೀಯ ವ್ಯಾಪಾರದಲ್ಲಿ ರಾಷ್ಟ್ರೀಯ ಕರೆನ್ಸಿಗಳ ಬಳಕೆಯನ್ನು ವಿಸ್ತರಿಸುವ ಪ್ರಯತ್ನ ಹಾಗೂ ನಿರ್ಬಂಧಗಳನ್ನು ವಿಧಿಸುವ ದೇಶಗಳಿಂದ ಸ್ವತಂತ್ರವಾಗಿ ಕಾರ್ಯನಿರ್ವಹಿಸುವ ಸಾರಿಗೆ, ಸರಕು ಸಾಗಣೆ ಮತ್ತು ಹಣಕಾಸು ವ್ಯವಸ್ಥೆಗಳನ್ನು ಅಭಿವೃದ್ಧಿಪಡಿಸುವುದರ ಮೇಲೆ ಈ ಸಭೆ ಗಮನಹರಿಸುತ್ತದೆ. ಕೃಷಿ, ವೈಜ್ಞಾನಿಕ, ತಾಂತ್ರಿಕ ಮತ್ತು ಮೂಲಸೌಕರ್ಯ ಸಹಯೋಗದಲ್ಲಿನ ಪ್ರಗತಿಯನ್ನು ಉಭಯ ನಾಯಕರು ಪರಿಶೀಲಿಸುವ ನಿರೀಕ್ಷೆಯಿದೆ. ಜಾಗತಿಕ ಮಟ್ಟದಲ್ಲಿ, ಏಷ್ಯಾ-ಪೆಸಿಫಿಕ್‌ನಲ್ಲಿ ವಿಕಸನಗೊಳ್ಳುತ್ತಿರುವ ಭದ್ರತಾ ವ್ಯವಸ್ಥೆ, ಉಕ್ರೇನ್‌ನಲ್ಲಿನ ಸಂಘರ್ಷ, ಅಫ್ಘಾನಿಸ್ತಾನದಲ್ಲಿನ ಪರಿಸ್ಥಿತಿ ಮತ್ತು ಪ್ಯಾಲೆಸ್ತೀನ್-ಇಸ್ರೇಲ್ ಯುದ್ಧ ಸೇರಿದಂತೆ ಅಂತಾರಾಷ್ಟ್ರೀಯ ಬೆಳವಣಿಗೆಗಳ ಕುರಿತು ಜೈಶಂಕರ್ ಮತ್ತು ಲಾವ್ರೊವ್ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಎರಡೂ ರಾಷ್ಟ್ರಗಳು ವಿಶ್ವಸಂಸ್ಥೆ, ಬ್ರಿಕ್ಸ್, ಎಸ್‌ಸಿಒ, ಜಿ-೨೦ ಸೇರಿದಂತೆ ದ್ವಿಪಕ್ಷೀಯ ಮತ್ತು ಬಹುಪಕ್ಷೀಯ ವೇದಿಕೆಗಳಲ್ಲಿ ರಾಜಕೀಯ ಸಂವಾದವನ್ನು ವಿಸ್ತರಿಸಲು ಪ್ರಯತ್ನಿಸುತ್ತಿರುವ ಸಮಯದಲ್ಲಿ ಈ ಸಭೆ ನಡೆಯುತ್ತಿದೆ.

><><><><><><><><

ಜಾಗತಿಕ ಶಕ್ತಿಯಾಗಿ ಭಾರತದ ನಿಲುವನ್ನು ರಷ್ಯಾ ಶ್ಲಾಘಿಸಿದೆ. ವೈವಿಧ್ಯಮಯ ವಿದೇಶಾಂಗ ನೀತಿಯೊಂದಿಗೆ ಭಾರತ ಪ್ರಮುಖ ಆರ್ಥಿಕ ಶಕ್ತಿ ಎಂದು ರಷ್ಯಾ ಕರೆದಿದೆ. ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಭಾರತದಲ್ಲಿನ ರಷ್ಯಾ ರಾಯಭಾರಿ ಡಿ'ಅಫೇರ್ಸ್, ರಷ್ಯಾ ಮತ್ತು ಭಾರತ ಪರಸ್ಪರ ಹಿತಾಸಕ್ತಿಗಳನ್ನು ಹೊಂದಿವೆ ಮತ್ತು ಪರಸ್ಪರ ಸಹಕರಿಸಲು ನಿರಂತರವಾಗಿ ಮಾರ್ಗಗಳನ್ನು ಕಂಡುಕೊಂಡಿವೆ. ಎರಡೂ ದೇಶಗಳ ನಡುವಿನ ಸಂಬಂಧಗಳು ವಿಸ್ತರಿಸುತ್ತಿವೆ ಎಂದು ಹೇಳಿದರು. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರ ಮಾಸ್ಕೋ ಭೇಟಿ ಸೇರಿದಂತೆ ಈ ವರ್ಷದ ಅಂತ್ಯದ ವೇಳೆಗೆ ರಷ್ಯಾ ಅಧ್ಯಕ್ಷ ಪುಟಿನ್ ಅವರ ಭಾರತ ಭೇಟಿಗೆ ವೇದಿಕೆ ಸಿದ್ಧವಾಗುತ್ತಿದೆ ಎಂದು ಅವರು ತಿಳಿಸಿದರು.

><><><><><><><><

ದೀಪಾವಳಿ ಮತ್ತು ಛತ್ ಹಬ್ಬಗಳ ಸಂದರ್ಭದಲ್ಲಿ ೧೨ ಸಾವಿರ ವಿಶೇಷ ರೈಲುಗಳು ಸಂಚರಿಸಲಿವೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಘೋಷಿಸಿದ್ದಾರೆ. ಬಿಹಾರದ ಎನ್‌ಡಿಎ ನಾಯಕರೊಂದಿಗೆ ಚರ್ಚೆ ನಡೆಸಿದ ನಂತರ ಈ ಘೋಷಣೆ ಮಾಡಲಾಗಿದೆ. ಜನರ ಪ್ರಯಾಣದ ಅಗತ್ಯತೆಗಳ ಕುರಿತು ಬಿಹಾರದ ನಾಯಕರೊಂದಿಗೆ ಚರ್ಚೆ ನಡೆಸಿದ ನಂತರ, ಸಚಿವಾಲಯವು ಹೊಸ ರೈಲುಗಳನ್ನು ಮಾತ್ರವಲ್ಲದೆ, ಹಲವಾರು ಇತರೆ ಯೋಜನೆಗಳು ಮತ್ತು ಮೂಲಸೌಕರ್ಯ ಯೋಜನೆಗಳನ್ನು ರೂಪಿಸಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

ಸಾಮಾನ್ಯ ವರ್ಗದ ಪ್ರಯಾಣಿಕರ ಅನುಕೂಲಕ್ಕಾಗಿ ದೆಹಲಿ ಮತ್ತು ಗಯಾ, ಸಹರ್ಸಾ ಮತ್ತು ಅಮೃತಸರ, ಛಪ್ರಾ ಮತ್ತು ದೆಹಲಿ ಹಾಗೂ ಮುಜಫರ್‌ಪುರ ಮತ್ತು ಹೈದರಾಬಾದ್‌ಗಳನ್ನು ಸಂಪರ್ಕಿಸಲು ನಾಲ್ಕು ಹೊಸ ಅಮೃತ್ ಭಾರತ್ ರೈಲುಗಳನ್ನು ಪ್ರಾರಂಭಿಸಲಾಗುವುದು ಎಂದು ಅವರು ತಿಳಿಸಿದರು. ಅಕ್ಟೋಬರ್ ೧೩ ಮತ್ತು ೨೬ ರ ನಡುವೆ ಪ್ರಯಾಣಿಸುವ ಪ್ರಯಾಣಿಕರಿಗೆ ಹಾಗೂ ನವೆಂಬರ್ ೧೭ ಮತ್ತು ಡಿಸೆಂಬರ್ ೧ ರ ನಡುವೆ ಹಿಂದಿರುಗುವ ಪ್ರಯಾಣಿಕರಿಗೆ ಹೊಸ ಪ್ರಾಯೋಗಿಕ ಯೋಜನೆಯಡಿಯಲ್ಲಿ ದೃಢೀಕೃತ ಟಿಕೆಟ್‌ಗಳು ಮತ್ತು ರಿಟರ್ನ್ ದರದಲ್ಲಿ ಶೇಕಡಾ ೨೦ ರಷ್ಟು ರಿಯಾಯಿತಿ ನೀಡಲಾಗುವುದು ಎಂದು ಸಚಿವ ಅಶ್ವಿನಿ ವೈಷ್ಣವ್ ವಿವರಿಸಿದರು.

><><><><><><><><

ಲೋಕಸಭಾ ಗದ್ದಲದ ನಡುವೆ ನಿನ್ನೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಆನ್‌ಲೈನ್ ಗೇಮಿಂಗ್ ನಿಯಂತ್ರಣ ಮಸೂದೆ ೨೦೨೫ ಅನ್ನು ಮಂಡಿಸಿದರು. ಆನ್‌ಲೈನ್ ಗೇಮಿಂಗ್ ವೇದಿಕೆಗಳನ್ನು ನಿಯಂತ್ರಿಸುವ ಉದ್ದೇಶದ 'ಆನ್‌ಲೈನ್ ಗೇಮಿಂಗ್ ಮಸೂದೆ'ಗೆ ಕೇಂದ್ರ ಸಚಿವ ಸಂಪುಟ ಇತ್ತೀಚೆಗೆ ಅನುಮೋದನೆ ನೀಡಿತ್ತು. ಇತ್ತೀಚಿನ ದಿನಗಳಲ್ಲಿ ಯುವ ಮತ್ತು ಮಧ್ಯಮ ವರ್ಗ ಹಾಗೂ ಬಡ ವರ್ಗದವರು ಈ ಆನ್‌ಲೈನ್ ಗೇಮಿಂಗ್ ಚಟಕ್ಕೆ ಒಳಗಾಗುತ್ತಿದ್ದಾರೆ. ವಿಶೇಷವಾಗಿ ಯುವಕರು ಮತ್ತು ಬಡ ವರ್ಗವನ್ನು ರಕ್ಷಿಸಲು ಈ ಮಸೂದೆಯನ್ನು ಮಂಡಿಸಲಾಗಿದೆ. ಆನ್‌ಲೈನ್ ಬೆಟ್ಟಿಂಗ್ ಅನ್ನು ಶಿಕ್ಷಾರ್ಹ ಅಪರಾಧವೆಂದು ಪರಿಗಣಿಸುವುದು, ಹಣ ಆಧಾರಿತ ಎಲ್ಲ ಆನ್‌ಲೈನ್ ಗೇಮ್‌ಗಳನ್ನು ನಿಷೇಧಿಸುವುದು, ಆನ್‌ಲೈನ್ ಗೇಮಿಂಗ್‌ಗೆ ಸಂಬಂಧಿಸಿದ ಹಣಕಾಸು ವ್ಯವಹಾರ ನಡೆಸಲು ಬ್ಯಾಂಕ್‌ಗಳು ಹಾಗೂ ಹಣಕಾಸು ಸಂಸ್ಥೆಗಳಿಗೆ ಅನುಮತಿ ನೀಡದಿರುವುದು ಸೇರಿ ಹಲವು ಅವಕಾಶಗಳನ್ನು ಈ ಮಸೂದೆ ಒಳಗೊಂಡಿದೆ.

><><><><><><><><

ಭಾರತದ ನೆಲದಿಂದ ಇತರೆ ದೇಶಗಳ ವಿರುದ್ಧ ರಾಜಕೀಯ ಚಟುವಟಿಕೆಗಳನ್ನು ನಡೆಸಲು ಭಾರತ ಅವಕಾಶ ನೀಡುವುದಿಲ್ಲ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ಬಾಂಗ್ಲಾದೇಶದ ಮಧ್ಯಂತರ ಸರ್ಕಾರ ಹೊರಡಿಸಿದ ಪತ್ರಿಕಾ ಹೇಳಿಕೆಯ ಕುರಿತು ಮಾಧ್ಯಮ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ಭಾರತದಲ್ಲಿ ಅವಾಮಿ ಲೀಗ್‌ನ ಸದಸ್ಯರು ಬಾಂಗ್ಲಾದೇಶ ವಿರೋಧಿ ಚಟುವಟಿಕೆಗಳನ್ನು ನಡೆಸುತ್ತಿಲ್ಲ ಮತ್ತು ಭಾರತೀಯ ಕಾನೂನಿಗೆ ವಿರುದ್ಧವಾದ ಯಾವುದೇ ಕ್ರಮವನ್ನು ಭಾರತ ಸರ್ಕಾರ ತೆಗೆದುಕೊಂಡಿಲ್ಲ. ಹೀಗಾಗಿ ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಪತ್ರಿಕಾ ಹೇಳಿಕೆ ತಪ್ಪಾಗಿದೆ ಎಂದು ಅವರು ಹೇಳಿದರು. ಜನರ ಇಚ್ಛೆ ಮತ್ತು ಆದೇಶವನ್ನು ಖಚಿತಪಡಿಸಿಕೊಳ್ಳಲು ಬಾಂಗ್ಲಾದೇಶದಲ್ಲಿ ಮುಕ್ತ, ನ್ಯಾಯಯುತ ಮತ್ತು ಸಮಗ್ರ ಚುನಾವಣೆಗಳನ್ನು ಆದಷ್ಟು ಬೇಗ ನಡೆಸಲಾಗುತ್ತದೆ ಎಂಬ ನಿರೀಕ್ಷೆಯನ್ನು ಭಾರತ ಪುನರುಚ್ಚರಿಸಿದೆ.

><><><><><><><><

ಒಡಿಶಾದ ಚಂಡಿಪುರದಲ್ಲಿರುವ ಇಂಟಿಗ್ರೇಟೆಡ್ ಟೆಸ್ಟ್ ರೇಂಜ್‌ನಿಂದ ಉಡಾವಣೆ ಮಾಡಿದ ಮಧ್ಯಂತರ ಶ್ರೇಣಿಯ ಖಂಡಾಂತರ ಕ್ಷಿಪಣಿ 'ಅಗ್ನಿ ೫' ಅನ್ನು ಭಾರತ ಯಶಸ್ವಿಯಾಗಿ ಪರೀಕ್ಷಿಸಿದೆ. ಉಡಾವಣೆಯು ಎಲ್ಲಾ ಕಾರ್ಯಾಚರಣೆ ಮತ್ತು ತಾಂತ್ರಿಕ ನಿಯತಾಂಕಗಳನ್ನು ಮೌಲ್ಯಮಾಪನ ಮಾಡಲಾಗಿದೆ. ಈ ಉಡಾವಣೆಯನ್ನು ಕಾರ್ಯತಂತ್ರದ ಪಡೆಗಳ ಕಮಾಂಡ್‌ನ ಆಶ್ರಯದಲ್ಲಿ ನಡೆಸಲಾಗಿದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ.

><><><><><><><><><

ಆಧಾರ್ ಆಧಾರಿತ ಗ್ರಾಹಕ ಪರಿಶೀಲನೆಗಾಗಿ ಭಾರತದ ವಿಶಿಷ್ಟ ಗುರುತಿನ ಪ್ರಾಧಿಕಾರ, ಖಾಸಗಿ ಉಪಗ್ರಹ ಆಧಾರಿತ ಇಂಟರ್ನೆಟ್ ಸೇವಾ ಪೂರೈಕೆದಾರ 'ಸ್ಟಾರ್‌ಲಿಂಕ್'ನೊಂದಿಗೆ ಒಪ್ಪಂದ ಮಾಡಿಕೊಂಡಿದೆ. ಜಾಗತಿಕ ಉಪಗ್ರಹ ಇಂಟರ್ನೆಟ್ ಪೂರೈಕೆದಾರರಿಂದ ಆಧಾರ್ ದೃಢೀಕರಣದ ಬಳಕೆಯು ಭಾರತದ ಡಿಜಿಟಲ್ ಮೂಲಸೌಕರ್ಯದ ವಿಶ್ವಾಸಾರ್ಹತೆಯನ್ನು ಎತ್ತಿಹಿಡಿಯುತ್ತದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ತಿಳಿಸಿದೆ.

><><><><><><><><><

ಬಲ್ಗೇರಿಯಾದಲ್ಲಿ ನಡೆದ ೨೦ ವರ್ಷದೊಳಗಿನ ವಿಶ್ವ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಕುಸ್ತಿಪಟು ತಪ್ಸ್ಯಾ ಚಿನ್ನದ ಪದಕ ವಿಜೇತರಾಗಿದ್ದಾರೆ. ಇದು ಈ ಕ್ರೀಡಾಕೂಟದಲ್ಲಿ ಭಾರತಕ್ಕೆ ಮೊದಲ ಚಿನ್ನದ ಪದಕವಾಗಿದೆ. ಮಹಿಳೆಯರ ೫೭ ಕೆಜಿ ವಿಭಾಗದ ಫೈನಲ್‌ನಲ್ಲಿ ಅವರು ನಾರ್ವೆಯ ಫೆಲಿಸಿಟಾಸ್ ಡೊಮಾಜೆವಾ ಅವರನ್ನು ೫-೨ ಅಂತರದಿಂದ ಸೋಲಿಸಿದರು. ಮಹಿಳೆಯರ ೬೮ ಕೆಜಿ ವಿಭಾಗದಲ್ಲಿ, ಭಾರತದ ಸೃಷ್ಟಿ ಫೈನಲ್‌ನಲ್ಲಿ ಜಪಾನ್‌ನ ರೇ ಹೊಶಿನೊ ವಿರುದ್ಧ ೦-೭ ಅಂತರದಿಂದ ಸೋತ ನಂತರ ಬೆಳ್ಳಿ ಪದಕ ಗೆದ್ದರು. ಈ ಮಧ್ಯೆ, ಪ್ರಿಯಾ ಮಲಿಕ್ ಮತ್ತು ರೀನಾ, ಆಯಾ ವಿಭಾಗಗಳಲ್ಲಿ ಫೈನಲ್ ತಲುಪಿದರು. ಮಹಿಳೆಯರ ೭೬ ಕೆಜಿ ವಿಭಾಗದ ಸೆಮಿಫೈನಲ್‌ನಲ್ಲಿ ಪ್ರಿಯಾ ಸೆರ್ಬಿಯಾದ ಎವೆಲಿನ್ ಉಜೆಲ್ಲಿ ವಿರುದ್ಧ ೧೦-೦ ಅಂತರದಿಂದ ಮೇಲುಗೈ ಸಾಧಿಸಿದರೆ, ರೀನಾ ೫೫ ಕೆಜಿ ವಿಭಾಗದಲ್ಲಿ ರೊಮೇನಿಯಾದ ವಾಯ್ಕುಲೆಸ್ಕು ಅಲೆಕ್ಸಾಂಡ್ರಾ ಅವರನ್ನು ೧೧-೧ ಅಂತರದಿಂದ ಸೋಲಿಸಿದರು. ಪುರುಷರ ೫೭ ಕೆಜಿ ವಿಭಾಗದಲ್ಲಿ ರಷ್ಯಾದ ಮಾಗೊಮೆಡ್ ಒಡ್ಜಾಮಿರೊ ವಿರುದ್ಧ ೫-೮ ಅಂತರದಿಂದ ಸೋತ ನಂತರ ಸುಮಿತ್ ಮಲಿಕ್ ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟರು. ವಿಶ್ವ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ಇಲ್ಲಿಯವರೆಗೆ, ಭಾರತೀಯ ಕುಸ್ತಿಪಟುಗಳು ಒಂದು ಚಿನ್ನ ಮತ್ತು ಎರಡು ಬೆಳ್ಳಿ ಸೇರಿದಂತೆ ಮೂರು ಪದಕಗಳನ್ನು ಗೆದ್ದಿದ್ದಾರೆ.

><><><><><><><><><

ಇದೇ ೨೯ ರಿಂದ ಸೆಪ್ಟೆಂಬರ್ ೭ ರವರೆಗೆ ಬಿಹಾರದಲ್ಲಿ ನಡೆಯಲಿರುವ ಪುರುಷರ ಏಷ್ಯಾ ಕಪ್ ಹಾಕಿ ಪಂದ್ಯಾವಳಿಗೆ ಹಾಕಿ ಇಂಡಿಯಾ, ೧೮ ಸದಸ್ಯರ ತಂಡವನ್ನು ಪ್ರಕಟಿಸಿದೆ. ಅನುಭವಿ ಆಟಗಾರ ಹರ್ಮಾನ್ ಪ್ರೀತ್ ಸಿಂಗ್ ತಂಡದ ನಾಯಕರಾಗಲಿದ್ದಾರೆ.

><><><><><><><><><